ಸುಂಕದ ಕಟ್ಟೆಯಿಂದ ಪೀಣ್ಯ ಎರಡನೇ ಹಂತಕ್ಕೆ ಹೋಗುವ ರಸ್ತೆ ರಿಪೇರಿ

2- ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಸುಂಕದ ಕಟ್ಟೆಯಿಂದ ಪೀಣ್ಯ ಎರಡನೇ ಹಂತಕ್ಕೆ ಹೋಗುವ ರಸ್ತೆಯು ತುಂಬಾ ಶಿಥಿಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಬಂದಿದ್ದಲ್ಲಿ ಇದರಿಂದ ಸಾರ್ವಜನಿಕರಿಗೂ ಹಾಗೂ ಕೈಗಾರಿಕೋದ್ಯಮಿಗಳಿಗೂ ಮತ್ತು ಕಾರ್ಮಿಕರಿಗೂ ಓಡಾಡಲೂ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ಈ ರಸ್ತೆಯನ್ನು ಯಾವಾಗ ದುರಸ್ತಿಗೊಳಿಸಲಾಗುವುದು?*

ಈ) *ಈ ರಸ್ತೆಯನ್ನು ಇಲ್ಲಿಯವರೆಗೂ ದುರಸ್ತಿಗೊಳಿಸದಿರಲು ಕಾರಣವೇನು?*

ಶ್ರೀ ಜಿ.ಹೆಚ್. ಅಶ್ವತ್‌ರೆಡ್ಡಿ (ಲೋಕೋಪಯೋಗಿ ಸಚಿವರು):

ಅ) ಈ ರಸ್ತೆಯು 4.5 ಕಿ.ಮೀ ಉದ್ದವಿದ್ದು, ಇದರಲ್ಲಿ 3.0 ಕಿ.ಮೀ. ಉದ್ದದರಸ್ತೆಯು ಕೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಬಂದಿದೆ.

ಇ) ಈ ರಸ್ತೆಯು ಬೆಂಗಳೂರು ನಗರ ಜಿಲ್ಲಾಧಿಕಾರಿಯವರ ವ್ಯಾಪ್ತಿಯಲ್ಲಿ ಬರುವುದರಿಂದ ಈ ರಸ್ತೆಯನ್ನು ದುರಸ್ತಿಪಡಿಸಿ ಸುಸ್ಥಿತಿಯಲ್ಲಿಡುವಂತೆ ಬೆಂಗಳೂರು ನಗರ ಜಿಲ್ಲಾಧಿಕಾರಿಯವರಿಗೆ ಸೂಚಿಸಲಾಗಿದೆ.

ಈ) ಅನುದಾನ ಇರದಿದ್ದರಿಂದ ರಸ್ತೆಯು ಅಭಿವೃದ್ಧಿಯನ್ನು ಮಾಡಿಲ್ಲವೆಂದು ತಿಳಿದು ಬಂದಿದೆ.

ರಾಜ್ಯದಲ್ಲಿರುವ ಮಂಡಲ ಪಂಚಾಯ್ತಿ ಸಂಖ್ಯೆ

293-ಶ್ರೀ ನಾರಾಯಣಸ್ವಾಮಿ(ಬೇತಮಂಗಲ): ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿರುವ ಮಂಡಲಪಂಚಾಯ್ತಿಗಳ ಸಂಖ್ಯೆ ಎಷ್ಟು?*

ಆ) *ಅವುಗಳಲ್ಲಿ ಅವಧಿ ಮುಗಿದಿರುವ ಮತ್ತು ಅವಧಿ ಮುಗಿದಿಲ್ಲದಿರುವ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು)?*

ಇ) *ಈ ಅವಧಿ ಮುಗಿದಿರುವ ಮಂಡಲ ಪಂಚಾಯ್ತಿಗಳಲ್ಲಿ ಎಷ್ಟು ಮಂಡಲಗಳಿಗೆ ಅಧಿಕಾರಗಳನ್ನು ನೇಮಿಸಲಾಗಿದೆ?*

ಈ) *ಉಳಿದ ಮಂಡಲಪಂಚಾಯ್ತಿಗಳಿಗೆ ಯಾವಾಗ ಆಡಳಿತಾಧಿಕಾರಿಗಳನ್ನು ನೇಮಿಸಲಾಗುವುದು?*

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) 2534.

ಆ) ಅನುಬಂಧ'ಅ' ಮತ್ತು 'ಆ'ದಲ್ಲಿ ವಿವರಗಳನ್ನು ನೀಡಲಾಗಿದೆ.

ಈ) ಯಾವಾಗ ಅವಧಿ ಪೂರ್ಣಗೊಳ್ಳುವುದೋ ಆಗ ಆಡಳಿತಾಧಿಕಾರಿಗಳನ್ನು ನೇಮಿಸಲಾಗುವುದು.